# ತುಮಕೂರು ವಿಶ್ವವಿದ್ಯಾನಿಲಯ

**ಪರೀಕ್ಷಾ ಭವನ, ಬಿ.ಹೆಚ್.ರಸ್ತೆ, ತುಮಕೂರು-572 103☎:0816-2255650, 2273511,ಫ್ಯಾಕ್ಸ್ :0816-2270719**


---

ಸಂಖ್ಯೆ : ತು.ವಿ.: ಪ.ವಿ.ಛಾ.ಮೌ:2025–26/ ದಿನಾಂಕ: 16.06.2025

## : ಪರಿಷ್ಕೃತ ಅಧಿಸೂಚನೆ :

**ವಿಷಯ: 2025ರ ಫೆಬ್ರವರಿ/ಮಾರ್ಚ್ ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ ಪ್ರಥಮ ಮತ್ತು ತೃತೀಯ (ನವೀನ ಮತ್ತು ಪೂರಕ) ಸೆಮಿಸ್ಟರ್ ಪರೀಕ್ಷೆಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ದಿನಾಂಕವನ್ನು ವಿಸ್ತರಿಸಿರುವ ಕುರಿತು.**

ಉಲ್ಲೇಖ: 1. ಈ ಕಚೇರಿ ಅಧಿಸೂಚನೆ ಸಂಖ್ಯೆ :ತು.ವಿ.: ಪ.ವಿ.:2024–25/984 ದಿನಾಂಕ: 17.01.2025

2. ಈ ಕಚೇರಿ ಅಧಿಸೂಚನೆ ಸಂಖ್ಯೆ : ತು.ವಿ.: ಪ.ವಿ.ಛಾ.ಮೌ:2025–26/ ದಿನಾಂಕ: 05.06.2025

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಅಧಿಸೂಚನೆಯಲ್ಲಿ **2025ರ ಫೆಬ್ರವರಿ/ಮಾರ್ಚ್** ಮಾಹೆಗಳಲ್ಲಿ ನಡೆದ ವಿವಿಧ ಸ್ನಾತಕೋತ್ತರ ಪದವಿಯ **ಪ್ರಥಮ ಮತ್ತು ತೃತೀಯ ಸೆಮಿಸ್ಟರ್ (ನವೀನ ಮತ್ತು ಪೂರಕ)** ಪರೀಕ್ಷೆಗಳಿಗೆ ಸಂಬಂಧಿಸಿದಂತೆ ಈಗಾಗಲೇ ಫಲಿತಾಂಶ ಪ್ರಕಟಿಸಿದ **(ಎಂ.ಸಿ.ಎ, ಎಂ.ಬಿ.ಎ ಎಂ.ಬಿ.ಎ ಫೈನಾನ್ಸ್ ಹಾಗೂ ಎಲ್.ಎಲ್.ಎಂ ಹೊರತುಪಡಿಸಿ)** ಎಲ್ಲಾ ವಿಷಯಗಳ ಉತ್ತರ ಪತ್ರಿಕೆಗಳ ಛಾಲೆಂಜ್ ಮೌಲ್ಯಮಾಪನಕ್ಕೆ ಉಲ್ಲೇಖ(2) ಅಧಿಸೂಚನೆಯಲ್ಲಿ ತಿಳಿಸಲಾಗಿತ್ತು. ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿನ ತಾಂತ್ರಿಕ ಕಾರಣದಿಂದಾಗಿ ಸದರಿ ಅಧಿಸೂಚನೆಯಲ್ಲಿನ ದಿನಾಂಕವನ್ನು ವಿಸ್ತರಿಸಿ. ಪರಿಷ್ಕೃತ ಅಧಿಸೂಚನೆಯನ್ನು ಹೊರಡಿಸಲಾಗಿದೆ. ವಿದ್ಯಾರ್ಥಿಗಳು ಸಂಬಂಧಪಟ್ಟ ವಿಭಾಗಗಳಲ್ಲಿ/ಕಾಲೇಜುಗಳಲ್ಲಿ ವಿಭಾಗದ ಮುಖ್ಯಸ್ಥರು/ಪ್ರಾಂಶುಪಾಲರ ಮುಖಾಂತರ **ಯು.ಯು.ಸಿ.ಎಂ.ಎಸ್** ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ಕಾಲೇಜಿಗೆ ಸಲ್ಲಿಸುವುದು. ಸದರಿ ಮಾಹಿತಿಯನ್ನು ಈ ಕೆಳಗೆ ನೀಡಿದ ದಿನಾಂಕದೊಳಗೆ ಕುಲಸಚಿವರು (ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರಿಗೆ ಸಲ್ಲಿಸಬೇಕೆಂದು ಈ ಮೂಲಕ ತಿಳಿಸಲಾಗಿದೆ.

| **ಛಾಲೆಂಜ್ ಮೌಲ್ಯಮಾಪನದ ಶುಲ್ಕ ಪ್ರತಿ ವಿಷಯಕ್ಕೆ (Per Paper)** | **ರೂ.1,310–00** |
|---|---|
| ವಿದ್ಯಾರ್ಥಿಗಳು ಛಾಲೆಂಜ್ ಮೌಲ್ಯಮಾಪನಕ್ಕೆ ಯು.ಯು.ಸಿ.ಎಂ.ಎಸ್ ತಂತ್ರಾಂಶದಲ್ಲಿ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ | **17.06.2025** |
| ಛಾಲೆಂಜ್ ಮೌಲ್ಯಮಾಪನಕ್ಕೆ ಸಲ್ಲಿಸಿದ ಅರ್ಜಿಗಳ ವಿವರಗಳನ್ನು ವಿಭಾಗ/ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕಡೆಯ ದಿನಾಂಕ | **18.06.2025** |

**ವಿಶೇಷ ಸೂಚನೆ:–**

- ಎಲ್ಲಾ ವಿದ್ಯಾರ್ಥಿಗಳು ಯು.ಯು.ಸಿ.ಎಂ.ಎಸ್ ತಂತ್ರಾಂಶದ ಮುಖಾಂತರ ವಿದ್ಯಾರ್ಥಿಗಳ ಲಾಗಿನ್ ಮೂಲಕ ಅರ್ಜಿಯನ್ನು ಸಲ್ಲಿಸಿ ಸದರಿ ಪ್ರತಿಯನ್ನು ವಿಭಾಗ/ಕಾಲೇಜುಗಳಿಗೆ ಸಲ್ಲಿಸುವುದು.
- **ಛಾಲೆಂಜ್ ಮೌಲ್ಯಮಾಪನದಲ್ಲಿ ಪಡೆದ ಅಂಕಗಳೇ ಅಂತಿಮವಾಗಿರುತ್ತದೆ ಕಡೆಯ ದಿನಾಂಕದ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸುವುದಿಲ್ಲ.**

ಕುಲಸಚಿವರು(ಪರೀಕ್ಷಾಂಗ)

ಕುಲಸಚಿವರು (ಮೌಲ್ಯಮಾಪನ)
ತುಮಕೂರು

ಗೆ,

ನಿರ್ದೇಶಕರು/ ಮುಖ್ಯಸ್ಥರು/ಸಂಯೋಜಕರು/ಪ್ರಾಂಶುಪಾಲರು/ವಿವಿಧ ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನಾ ವಿಭಾಗಗಳು ಮತ್ತು ವಿವಿಧ ಸ್ನಾತಕೋತ್ತರ ಸಂಯೋಜಿತ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

**ಪ್ರತಿಗಳು:**

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಿಸ್ಟಂ ಅನಾಲಿಸಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಕಚೇರಿ ಪ್ರತಿ.